ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 7/7/2020

# ದಾಖಲೆ ಇದ್ದರೆ ಬಿಡುಗಡೆ ಮಾಡಲಿ

## ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರಿಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿರುಗೇಟು

**ಬೆಂಗಳೂರು:** ಸಮಾಜ ಕಲ್ಯಾಣ, ವೈದ್ಯಕೀಯ ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆಯಲ್ಲಿ ಮೂರು ಸಾವಿರ ಕೋಟಿ ರೂ. ಅವ್ಯವಹಾರ ಆಗಿದೆ ಎಂದು ಆರೋಪ ಮಾಡಿರುವ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರು ದಾಖಲೆಗಳೊಂದಿಗೆ ಮಾತನಾಡಲಿ ಎಂದು ಮುಖ್ಯಮಂತ್ರಿ ಬಿ.ಎಸ್ ಯಡಿಯೂರಪ್ಪ ತಿರುಗೇಟು ನೀಡಿದ್ದಾರೆ.

ಸುದ್ದಿಗಾರರ ಜತೆ ಮಾತನಾಡಿ, ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದವರು. ಈಗ ಪ್ರತಿಪಕ್ಷ ನಾಯಕರಾಗಿ ಜವಾಬ್ದಾರಿಯಿಂದ ಮಾತನಾಡಬೇಕು. ಅವ್ಯವಹಾರ ಕುರಿತು ದಾಖಲೆ ಇದ್ದರೆ ಬಿಡುಗಡೆ ಮಾಡಲಿ ಎಂದು ಸವಾಲು ಹಾಕಿದರು.

ಅವ್ಯವಹಾರ ಆರೋಪ ಸಾಬೀತಾದರೆ ತಪ್ಪಾಗಿದ್ದರೆ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗುವುದು. ಅವರೇ ವಿಧಾನಸೌಧಕ್ಕೆ ಬಂದು ಕುಳಿತು ದಾಖಲೆ ಪರಿಶೀಲಿಸಲಿ, ಸರ್ಕಾರಕ್ಕೆ ಸೂಕ್ತ ಸಲಹೆ ಕೊಡಲಿ. ಏನೇ ಲೋಪ ದೋಷ ಇದ್ದರೆ ಸರಿಪಡಿಸಿಕೊಳ್ಳುತ್ತೇವೆ. ಅನಗತ್ಯ ಟೀಕೆ ಮಾಡುವುದು ಸರಿಯಲ್ಲ ಎಂದು ಹೇಳಿದರು.

**ಹಸಿರು ಕ್ರಾಂತಿಯ ಹರಿಕಾರ:** ಇದಕ್ಕೂ ಮುನ್ನ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನರಾಂ ಪುಣ್ಯತಿಥಿ ಅಂಗವಾಗಿ ವಿಧಾನಸೌಧ ಆವರಣದಲ್ಲಿ ಜಗಜೀವನರಾಂ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿ, ಹಸಿರು ಕ್ರಾಂತಿಯ ಹರಿಕಾರ, ರಾಷ್ಟ್ರ ನಾಯಕ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನರಾಂ ಅವರ ಆದರ್ಶ, ಚಿಂತನೆಗಳು ಸದಾ ಪ್ರಸ್ತುತ. ಯುವ ಪೀಳಿಗೆಗೆ ಅವರ ವ್ಯಕ್ತಿತ್ವ ಹಾಗೂ ಜೀವನಚರಿತ್ರೆ ಪರಿಚಯಿಸುವ ಕೆಲಸ ಮಾಡಬೇಕಿದೆ ಎಂದರು. ಶೋಷಿತರ ಹಕ್ಕಿಗಾಗಿ ಹೋರಾಟ ಮಾಡಿದ ಮಹಾನ್ ವ್ಯಕ್ತಿತ್ವ ಬಾಬು ಜಗಜೀವನರಾಂ ಅವರದು. ಸತತ ನಾಲ್ಕು ದಶಕಗಳ ಕಾಲ ಸಂಸದರಾಗಿ ಸೇವೆ ಸಲ್ಲಿಸಿದ್ದ ಅವರು, ಕೇಂದ್ರ ಕೃಷಿಸಚಿವರಾಗಿ ಆಹಾರ ಕೊರತೆ ಎದುರಿಸುತ್ತಿದ್ದ ಸಂದರ್ಭದಲ್ಲಿ ಹಸಿರು ಕ್ರಾಂತಿ ಮೂಲಕ ಆಹಾರ ಸ್ವಾವಲಂಬನೆ ಗುರಿ ಸಾಧಿಸಿದರು. ಕೇಂದ್ರ ರಕ್ಷಣಾ ಸಚಿವರಾಗಿ ಅವರ ಸೇವೆ ಸ್ಮರಣೀಯ. ರೈತರು ಹಾಗೂ ಯೋಧರ ಬಗ್ಗೆ ಅವರಿಗೆ ಇದ್ದ ಕಳಕಳಿ ಅಪಾರ ಎಂದು ಬಣ್ಣಿಸಿದರು.

ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ, ಗೃಹ ಸಚಿವ ಬಸವರಾಜ ಬೊಮ್ಮಾಯಿ, ಸಂಸದ ನಾರಾಯಣಸ್ವಾಮಿ, ಮಾಜಿ ಸಚಿವ ಆಂಜನೇಯ ಉಪಸ್ಥಿತರಿದ್ದರು.



**ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಡಾ.ಬಾಬು ಜಗಜೀವನರಾಂ ಪುಣ್ಯತಿಥಿ ಅಂಗವಾಗಿ ವಿಧಾನಸೌಧ ಆವರಣದಲ್ಲಿ ಜಗಜೀವನರಾಂ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.**

## ನೇಕಾರ ಸಮ್ಮಾನ್ ಯೋಜನೆಗೆ ಸಿಎಂ ಚಾಲನೆ

**ಬೆಂಗಳೂರು:** ಕೊರೊನಾ ಲಾಕ್‌ಡೌನ್‌ನಿಂದ ಸಂಕಷ್ಟಕ್ಕೆ ಸಿಲುಕಿರುವ ನೇಕಾರ ಸಮುದಾಯಕ್ಕೆ ನೇಕಾರ ಸಮ್ಮಾನ ಯೋಜನೆ ಅಡಿಯಲ್ಲಿ ಫಲಾನುಭವಿಗಳಿಗೆ ನೇರ ನಗದು ವರ್ಗಾವಣೆಗೆ ಮುಖ್ಯಮಂತ್ರಿ ಯಡಿಯೂರಪ್ಪ ಚಾಲನೆ ನೀಡಿದರು.

ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿ, ಮೊದಲನೇ ಹಂತದಲ್ಲಿ 19,744 ಕೈಮಗ್ಗ ನೇಕಾರರಿಗೆ ನೇರ ನಗದು ವರ್ಗಾವಣೆ ಮಾಡುವ ಮುಖಾಂತರ ಪ್ರತಿ ನೇಕಾರರಿಗೆ 2 ಸಾವಿರ ರೂ.ಗಳನ್ನು ಅವರ ಬ್ಯಾಂಕ್ ಖಾತೆಗಳಿಗೆ ವರ್ಗಾವಣೆಗೆ ಮಾಡಲಾಗುತ್ತಿದೆ ಎಂದರು.

ನಾಲ್ಕನೇ ರಾಷ್ಟ್ರೀಯ ಕೈಮಗ್ಗ ಗಣತಿಯ ಪ್ರಕಾರ ರಾಜ್ಯದಲ್ಲಿ ಒಟ್ಟು 54,789 ಕೈಮಗ್ಗ ನೇಕಾರರು ನೋಂದಣಿ ಮಾಡಿಕೊಂಡಿದ್ದಾರೆ. ರಾಜ್ಯದಲ್ಲಿನ ರೇಷ್ಮೆ ಹತ್ತಿ ಹಾಗೂ ಉಣ್ಣೆ ವಲಯದ ಕೈಮಗ್ಗ ಮತ್ತು ಪೂರಕ ಚಟುವಟಿಕೆಗಳಲ್ಲಿ ತೊಡಗಿರುವ ಕೈಮಗ್ಗ ನೇಕಾರರು ಈ ಯೋಜನೆಗೆ ಅರ್ಹರಾಗಿರುತ್ತಾರೆ. ನೇಕಾರ ಸಮ್ಮಾನ್ ಯೋಜನೆಯಡಿಯಲ್ಲಿ ಪ್ರತಿ ವರ್ಷ 10.96 ಕೋಟಿ ರೂ. ವೆಚ್ಚವಾಗಲಿದೆ ಎಂದು ಹೇಳಿದರು. ಕೈಮಗ್ಗ ಗಣತಿಯಲ್ಲಿ ನೇಕಾರರ ಮಾಹಿತಿಗಳು ಬಿಟ್ಟು ಹೋಗಿದ್ದರೆ ಅಂತಹವರಿಗೂ ಸಹ ಈ ಯೋಜನೆಯಲ್ಲಿ ಅವಕಾಶ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈವರೆಗೆ 40,634 ಕೈಮಗ್ಗ ನೇಕಾರರು ಸೇವಾ ಸಿಂಧು ತಂತ್ರಾಂಶದಲ್ಲಿ ನೋಂದಾಯಿಸಿಕೊಂಡಿದ್ದಾರೆ. ಈ ಪೈಕಿ 37,314 ಅರ್ಜಿಗಳನ್ನು ಪರಿಶೀಲಿಸಿ ಅನುಮೋದನೆ ನೀಡಲಾಗಿದೆ. ಇನ್ನುಳಿದ ಅರ್ಹ ಫಲಾನುಭವಿಗಳಿಗೂ ಮುಂದಿನ ದಿನಗಳಲ್ಲಿ ಆರ್ಥಿಕ ನೆರವನ್ನು ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗುವುದು ಎಂದು ತಿಳಿಸಿದರು..

ಇದರೊಂದಿಗೆ ವಿದ್ಯುತ್ ಮಗ್ಗ ಘಟಕಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ 1.25 ಲಕ್ಷ ಕೂಲಿ ಕೆಲಸಗಾರರಿಗೆ 2 ಸಾವಿರ ರೂ. ಒಂದು ಬಾರಿಯ ಪರಿಹಾರ ಧನ ವಿತರಿಸಲಾಗುತ್ತಿದ್ದು, ಈ ವರೆಗೆ ಅನುಮೋದಿಸಲಾದ 8897 ಅರ್ಜಿದಾರರಿಗೆ ಡಿಬಿಟಿ ಮೂಲಕ ಪರಿಹಾರ ವಿತರಣೆಗೆ ಚಾಲನೆ ನೀಡಲಾಯಿತು. ಜವಳಿ ಸಚಿವ ಶ್ರೀಮಂತ ಪಾಟೀಲ ಮಾತನಾಡಿ, ನೇಕಾರ ಸಮ್ಮಾನ್ ಯೋಜನೆಯಿಂದ ಸಂಕಷ್ಟಕ್ಕೊಳಗಾಗಿರುವ ನೇಕಾರರಿಗೆ ಅನುಕೂಲ ವಾಗಲಿದೆ ಎಂದರು. ಎಂಎಸ್ಎಂಇ, ಕೈಮಗ್ಗ ಮತ್ತು ಜವಳಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎಂ. ಮಹೇಶ್ವರ ರಾವ್, ಕೈಮಗ್ಗ ಮತ್ತು ಜವಳಿ ಇಲಾಖೆ ಆಯುಕ್ತ ಉಪೇಂದ್ರ ಪ್ರತಾಪ್ ಸಿಂಗ್ ಮತ್ತು ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.